# ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು.

ಶಾಸನಬದ್ಧ ಸಹಕಾರಿ ಸಂಸ್ಥೆ
ಸೌಹಾರ್ದ ಸಹಕಾರಿ ಸೌಧ, ನಂ.68, 18ನೇ ಅಡ್ಡರಸ್ತೆ, ಮಾರ್ಗೋಸಾ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560055, Ph : 080-23378375-80, website : www.souharda.coop
Email : souharda@souharda.coop

**ಸಂಖ್ಯೆ: ಸಂ.ಸ/ಸಿಬ್ಬಂದಿ/ಕ.ನೇ&ಗು.ನೇ/03/2026-27** **ದಿನಾಂಕ: 23.09.2026**

## ಪ್ರಕಟಣೆ

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಈ ಸಂಸ್ಥೆಗೆ ಅಗತ್ಯ ಇರುವ ವಿವಿಧ ಹುದ್ದೆಗಳಿಗೆ ಸಲಹೆಗಾರರು ಹಾಗೂ ಸಿಬ್ಬಂದಿಗಳನ್ನು ಗುತ್ತಿಗೆ ಆಧಾರದಲ್ಲಿ ತಾತ್ಕಾಲಿಕ ನೇಮಕಾತಿಯನ್ನು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ-1997 ಮತ್ತು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ಇದರ ಉಪವಿಧಿ ಹಾಗೂ ಸಿಬ್ಬಂದಿ ಸೇವಾ ನಿಯಮಾವಳಿಯ ನೇಮಕಾತಿ ನಿಯಮ ಹಾಗೂ ಆಡಳಿತ ಮಂಡಲಿ ಮತ್ತು ಸಿಬ್ಬಂದಿ ನೇಮಕಾತಿ ಸಮಿತಿಯ ನಿರ್ಣಯದಂತೆ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ದಿನಾಂಕ 17.06.2026 ರ ಆಡಳಿತ ಮಂಡಳಿ ಸಭೆಯು ಅನುಮೋದಿಸಿದಂತೆ ಸಲಹೆಗಾರರು ಮತ್ತು ಗುತ್ತಿಗೆ ಆಧಾರದ ನೇಮಕಾತಿಗೆ ಪರಿಗಣಿಸಲಾದ ಹುದ್ದೆಗಳ ವಿವರ ಕೆಳಗಿನಂತಿದೆ.

| ಕ್ರ.ಸಂ | ಹುದ್ದೆಗಳ ಹೆಸರು | ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ & ಅನುಭವ |
|---|---|---|---|
| 1 | ಲೀಗಲ್ ಕನ್ಸಲ್ಟೆಂಟ್ | 02 | ಅಂಗೀಕೃತ ವಿಶ್ವವಿದ್ಯಾಲಯದಿಂದ ಕಾನೂನು ಪದವಿ ಕಡ್ಡಾಯ. ಕಂಪ್ಯೂಟರ್ ಪರಿಣಿತಿ ಕಡ್ಡಾಯ. ಬ್ಯಾಂಕಿಂಗ್ ಅಥವಾ ಸಹಕಾರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ/ಅನುಭವ ಹೊಂದಿದವರಿಗೆ ಆದ್ಯತೆ. ಗರಿಷ್ಠ ವಯೋಮಿತಿ 40 ವರ್ಷಗಳು |
| 2 | ಸೌಹಾರ್ದ ಅಭಿವೃದ್ಧಿ ಅಧಿಕಾರಿ | 04 | ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದೇ ವಿಷಯದಲ್ಲಿ ಪದವಿ ಪಡೆದಿರಬೇಕು. ಕಂಪ್ಯೂಟರ್ ಪರಿಣಿತಿ ಕಡ್ಡಾಯ. ಬ್ಯಾಂಕಿಂಗ್ ಅಥವಾ ಸಹಕಾರ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸಿದ ಅನುಭವ ಹೊಂದಿದವರಿಗೆ ಆದ್ಯತೆ. ಗರಿಷ್ಠ ವಯೋಮಿತಿ 30 ವರ್ಷಗಳು. |
| 3 | ಉಪ ಸಿಬ್ಬಂದಿ ಕಮ್ ವಾಹನ ಚಾಲಕ | 04 | ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಲಿ ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಲಘು ಮೋಟಾರ್ ವಾಹನ ಚಾಲನಾ ಪರವಾನಿಗೆ ಪಡೆದು ಮೂರು ವರ್ಷಗಳಾಗಿರತಕ್ಕದ್ದು. ಲಘುವಾಹನ ಚಾಲಕರಾಗಿ ಕನಿಷ್ಠ ಮೂರು ವರ್ಷಗಳ ಅನುಭವ ಹೊಂದಿದವರಿಗೆ ಆದ್ಯತೆ.ಗರಿಷ್ಠ ವಯೋಮಿತಿ 30 ವರ್ಷಗಳು. |

**ಗಮನಕ್ಕಾಗಿ :**

1) ಕ್ರಮ ಸಂಖ್ಯೆ 01 & 02 ಹುದ್ದೆಗಳಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳನ್ನು ಓದಲು, ಬರೆಯಲು ಮತ್ತು ಮಾತನಾಡಲು ಅಗತ್ಯ ಜ್ಞಾನ ಹೊಂದಿರಬೇಕು. ಕ್ರಮ ಸಂಖ್ಯೆ 03 ಕ್ಕೆ ಕನ್ನಡ ಓದಲು, ಬರೆಯಲು ಮತ್ತು ಮಾತನಾಡಲು ಭಾಷ ಜ್ಞಾನ ಕಡ್ಡಾಯ.

2) **ಅರ್ಜಿ ಶುಲ್ಕ:** ಕ್ರಮ ಸಂಖ್ಯೆ 01 ಮತ್ತು 02 ರ ಹುದ್ದೆಗಳಿಗೆ ಅರ್ಜಿ ಶುಲ್ಕ - ರೂ.500/- ಮತ್ತು ಉಪಸಿಬ್ಬಂದಿ ಕಂ ವಾಹನ ಚಾಲಕ ಹುದ್ದೆಗೆ ಅರ್ಜಿ ಶುಲ್ಕ-ರೂ.300/- ತಾವು ಸಲ್ಲಿಸುತ್ತಿರುವ ಹುದ್ದೆಗೆ ಸಂಬಂಧಿಸಿದ ಅರ್ಜಿ ಶುಲ್ಕವನ್ನು **'ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., (Karnataka State Souharda Federal Cooperative Ltd.,)** ಈ ಹೆಸರಿನಲ್ಲಿ ಬೆಂಗಳೂರಿನಲ್ಲಿ ಸಂದಾಯವಾಗುವಂತೆ ಡಿ.ಡಿ. (ಡಿಮ್ಯಾಂಡ್ ಡ್ರಾಫ್ಟ್) ತೆಗೆದು, ಅರ್ಜಿಯ ಜೊತೆ ಲಗತ್ತಿಸಿ ಕಳುಹಿಸುವುದು.

3) ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಂಬಂಧಿಸಿದ ಹುದ್ದೆಗಳಿಗೆ ನಿಗದಿತ ಗರಿಷ್ಠ ವಯೋಮಿತಿ ಮೀರಿರಬಾರದು.

## ನೇಮಕಾತಿ ಪ್ರಕ್ರಿಯೆಯ ವಿವರಗಳು

**1. ಅರ್ಜಿಸಲ್ಲಿಸುವ ವಿಧಾನ :**

1) ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯ ವೆಬ್‌ಸೈಟ್ (www.souharda.coop) ನಿಂದ ಡೌನ್‌ಲೋಡ್ ಮಾಡಿಕೊಂಡು, ಪೂರ್ತಿಯಾಗಿ ಭರ್ತಿ ಮಾಡಿ, ಈ ವಿಳಾಸಕ್ಕೆ **"ಸೌಹಾರ್ದ ಸಹಕಾರಿ ಸೌದ" #68, ಒಂದನೇ ಮಹಡಿ, 18ನೇ ಅಡ್ಡರಸ್ತೆ, ಮಾರ್ಗೋಸ ರಸ್ತೆ ಮಲ್ಲೇಶ್ವರಂ, ಬೆಂಗಳೂರು–560055**. ಇಲ್ಲಿಗೆ ದಿನಾಂಕ: **15.10.2026** ಸಾಯಂಕಾಲ **5.30ರ** ರೊಳಗಾಗಿ ತಲುಪುವಂತೆ ಅರ್ಜಿಗಳನ್ನು ಕಳುಹಿಸತಕ್ಕದ್ದು.

2) ಅರ್ಜಿಯಲ್ಲಿ ನಮೂದಿಸುವ ಇ–ಮೇಲ್ ವಿಳಾಸ ಹಾಗೂ ಮೊಬೈಲ್ ಸಂಖ್ಯೆ(whatsApp)ಯನ್ನು, ನೇಮಕಾತಿ ಪ್ರಕ್ರಿಯೆಯ ಸಂವಹನಕ್ಕೆ ಪರಿಗಣಿಸಲಾಗುವುದು.

3) ಅಧಿಸೂಚನೆಯಲ್ಲಿ ನೀಡಿರುವ ಸೂಚನೆಗಳನ್ವಯವೇ ಅರ್ಜಿಯನ್ನು ಪೂರ್ತಿಯಾಗಿ ಭರ್ತಿ ಮಾಡತಕ್ಕದ್ದು. ಅಪೂರ್ಣ ಹಾಗೂ ತಪ್ಪು ಮಾಹಿತಿಗಳನ್ನೊಳಗೊಂಡ ಅಥವಾ ನಿಗದಿತ ಸಮಯದ ನಂತರ ತಲುಪಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**2. ಅರ್ಜಿಯ ಜೊತೆ ಸಲ್ಲಿಸಬೇಕಾದ ದಾಖಲಾತಿಗಳು :**

1) ಹುದ್ದೆಗೆ ನಿಗದಿಪಡಿಸಿದ ಅರ್ಜಿ ನಮೂನೆಯನ್ನು ಪೂರ್ಣವಾಗಿ ಭರ್ತಿ ಮಾಡಿರುವ ಅರ್ಜಿ.

2) ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ರುಜುವಾತು ಪಡಿಸುವ ಸ್ವಯಂ ದೃಢೀಕರಿಸಿದ ದಾಖಲಾತಿಗಳು. (ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರಗಳ ಸ್ವಯಂ ದೃಢೀಕರಿಸಿದ ಪ್ರತಿಗಳನ್ನು ಲಗತ್ತಿಸಬೇಕು).

3) ಸೇವೆಯಲ್ಲಿರುವ ಅಭ್ಯರ್ಥಿಗಳಿಂದ ತಾವು ಸೇವೆ ಸಲ್ಲಿಸುತ್ತಿರುವ ಪ್ರಾಧಿಕಾರ/ಸಂಸ್ಥೆಯಿಂದ ಅರ್ಜಿ ಸಲ್ಲಿಕೆಗೆ ಅನುಮತಿಪತ್ರ. (ಮಾದರಿ ನೀಡಲಾಗಿದೆ).

4) ಕಂಪ್ಯೂಟರ್ ಜ್ಞಾನವನ್ನು ಹೊಂದಿರುವ ಕುರಿತು ಸ್ವಯಂ ದೃಢೀಕರಿಸಿದ ದಾಖಲಾತಿ.

**3. ವಯೋಮಿತಿ:**

| | | |
|---|---|---|
| 1) ಲೀಗಲ್ ಕನ್ಸಲ್ಟೆಂಟ್ | : | ಗರಿಷ್ಠ 40 ವರ್ಷಗಳು. |
| 2) ಸೌಹಾರ್ದ ಅಭಿವೃದ್ಧಿ ಅಧಿಕಾರಿ | : | ಗರಿಷ್ಠ 30 ವರ್ಷಗಳು. |
| 3) ಉಪಸಿಬ್ಬಂದಿ ಕಂ ವಾಹನ ಚಾಲಕ | : | ಗರಿಷ್ಠ 30 ವರ್ಷಗಳು. |

**4. ಆಯ್ಕೆ ವಿಧಾನ :**

1) ಎಲ್ಲಾ ಹುದ್ದೆಗಳಿಗೂ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುತ್ತದೆ.

2) ಉಪಸಿಬ್ಬಂದಿ ಕಂ ವಾಹನ ಚಾಲಕ ಸಿಬ್ಬಂದಿಗಳಿಗೆ ವಾಹನ ಚಾಲನಾ ಪ್ರಾಯೋಗಿಕ ಪರೀಕ್ಷೆ ಇರುತ್ತದೆ.

3) ಸಂದರ್ಶನ/ಕೌಶಲ್ಯ ಪರೀಕ್ಷೆಗೆ ಕರೆಯಲ್ಪಟ್ಟ ಅಭ್ಯರ್ಥಿಗಳು ತಮ್ಮ ಸ್ವಂತ ವೆಚ್ಚದಲ್ಲಿ ಹಾಜರಾಗಬೇಕು. ಯಾವುದೇ ಪ್ರಯಾಣ ಭತ್ಯೆ/ದಿನ ಭತ್ಯೆಗಳನ್ನು ನೀಡಲಾಗುವುದಿಲ್ಲ.

4) ಎಲ್ಲಾ ಹುದ್ದೆಗಳಿಗೂ ಸಂದರ್ಶನದ ಸ್ಥಳ ಬೆಂಗಳೂರು ಆಗಿರುತ್ತದೆ.

**5. ಸಾಮಾನ್ಯ ಸೇವಾ ಷರತ್ತುಗಳು:**

1) ಸಂಯುಕ್ತ ಸಹಕಾರಿಯ ಸೇವೆಗೆ ಆಯ್ಕೆಯಾದ ಅಭ್ಯರ್ಥಿಯು 11 ತಿಂಗಳುಗಳ ಅವಧಿಯ ಗುತ್ತಿಗೆ ಸೇವಾ ಅವಧಿಯನ್ನು ಹೊಂದಿರುತ್ತಾರೆ. ಕ.ರಾ.ಸೌ. ಸಂಯುಕ್ತ ಸಹಕಾರಿಯ ಆಡಳಿತ ಮಂಡಳಿಯ ನಿರ್ಣಯಕ್ಕೆ ಒಳಪಟ್ಟು ಗುತ್ತಿಗೆ ಅವಧಿಯನ್ನು ಮುಂದುವರೆಸಬಹುದು.

2) ಲೀಗಲ್ ಕನ್ಸಲ್ಟೆಂಟ್ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಸಂಯುಕ್ತ ಸಹಕಾರಿಯೊಂದಿಗೆ ಗೌಪ್ಯತಾ ಒಪ್ಪಂದ ಮಾಡಿಕೊಳ್ಳುವ ಮೂಲಕ ಸೇವೆಗೆ ಹಾಜರಾಗುವುದು. ಸೇವೆಗೆ ಸೇರಿದ ದಿನಾಂಕದಿಂದ ಆದೇಶವು 11 ತಿಂಗಳ ವರೆಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೊ ಅಲ್ಲಿಯವರೆಗೆ ಅಸ್ತಿತ್ವದಲ್ಲಿರುತ್ತದೆ.

3) ಲೀಗಲ್ ಕನ್ಸಲ್ಟೆಂಟ್ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಪೂರ್ಣಕಾಲಿಕ ಸಲಹೆಗಾರರಾಗಿ ಸಂಯುಕ್ತ ಸಹಕಾರಿಯ ಕಛೇರಿಯಿಂದಲೇ ಕಾರ್ಯನಿರ್ವಹಿಸುವುದು.

4) ಸಂಯುಕ್ತ ಸಹಕಾರಿಯ ಕನ್ಸಲ್ಟೆಂಟ್ ಮತ್ತು ಗುತ್ತಿಗೆ ಸೇವೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಆಯಾ ಹುದ್ದೆಗಳಿಗನುಗುಣವಾಗಿ ಈ ಕೆಳಗಿನಂತೆ ಕ್ರೋಢೀಕೃತ ವೇತನ ನೀಡಲಾಗುತ್ತದೆ.

| ಕ್ರ.ಸಂ | ಹುದ್ದೆಗಳ ಹೆಸರು | ಮಾಸಿಕ ವೇತನ |
|---|---|---|
| 1 | ಲೀಗಲ್ ಕನ್ಸಲ್ಟೆಂಟ್ | 40,000/–( ತೆರಿಗೆ ಕಾಯ್ದೆಯನ್ವಯ ಅಗತ್ಯ ಕಡಿತವನ್ನು ಮಾಡಲಾಗುವುದು.) |
| 2 | ಸೌಹಾರ್ದ ಅಭಿವೃದ್ಧಿ ಅಧಿಕಾರಿ | 30,000/–( ಅನ್ವಯವಾಗುವ ಭವಿಷ್ಯನಿಧಿ ಕಡಿತ ಮಾಡಲಾಗುವುದು) |
| 3 | ಉಪಸಿಬ್ಬಂದಿ ಕಮ್ ವಾಹನ ಚಾಲಕ | 18,000/–( ಅನ್ವಯವಾಗುವ ಭವಿಷ್ಯನಿಧಿ, ಇಎಸ್ಐ ಅನ್ನು ಕಡಿತ ಮಾಡಲಾಗುವುದು) |

5) ವಿದ್ಯಾರ್ಹತೆ ಹಾಗೂ ಅನುಭವಕ್ಕೆ ಸಂಬಂಧಪಟ್ಟ ಮೂಲ ದಾಖಲಾತಿಗಳನ್ನು ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6) ಸಂಯುಕ್ತ ಸಹಕಾರಿಯು ಯಾವುದೇ ಹುದ್ದೆಗೆ ಸಂಬಂಧಿಸಿದಂತೆ ಪ್ರತ್ಯೇಕ ಸೇವಾ ಷರತ್ತುಗಳನ್ನು ವಿಧಿಸಬಹುದಾಗಿದೆ.

7) ಆಯ್ಕೆಯಾದ ಅಭ್ಯರ್ಥಿಗಳು ಸಂಯುಕ್ತ ಸಹಕಾರಿಯ ಸೇವಾ ನಿಯಮಗಳಿಗೆ ಒಳಪಟ್ಟಿರುತ್ತಾರೆ.

8) ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿಯೂ ಯಾವುದೇ ಕಾರಣವನ್ನು ನೀಡದೆ ರದ್ದುಗೊಳಿಸುವ ಅಧಿಕಾರವನ್ನು ಸಂಯುಕ್ತ ಸಹಕಾರಿಯು ಹೊಂದಿರುತ್ತದೆ.

9) ಆಯ್ಕೆಯಾದ ಅಭ್ಯರ್ಥಿಗಳು ಮೂಲ ಅಂಕಪಟ್ಟಿಗಳನ್ನು ನೀಡಿ ಸೇವೆಗೆ ಹಾಜರಾಗಬೇಕು. ಸೇವೆಯಿಂದ ಬಿಡುಗಡೆ ಸಂದರ್ಭದಲ್ಲಿ ಇವನ್ನು ಹಿಂದಿರುಗಿಸಲಾಗುವುದು.

10) ಲೀಗಲ್ ಕನ್ಸಲ್ಟೆಂಟ್ ಹುದ್ದೆಗೆ ಆಯ್ಕೆಯಾಗುವ ಅಭ್ಯರ್ಥಿಗಳು ರೂ. 50,000/– ಭದ್ರತಾ ಠೇವಣಿ ಹಾಗೂ ಸೌಹಾರ್ದ ಅಭಿವೃದ್ಧಿ ಅಧಿಕಾರಿ ಮತ್ತು ಉಪಸಿಬ್ಬಂದಿ ಕಂ ವಾಹನ ಚಾಲಕ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳು ರೂ. 25,000/– ಗಳ ಭದ್ರತಾ ಠೇವಣಿಯನ್ನು ನೀಡಿ ಸೇವೆಗೆ ಹಾಜರಾಗಬೇಕು. ಸೇವೆಯಿಂದ ಬಿಡುಗಡೆ ಸಂದರ್ಭದಲ್ಲಿ ಬಡ್ಡಿ ಸಹಿತವಾಗಿ ಹಿಂದಿರುಗಿಸಲಾಗುವುದು.

11) ನೇಮಕಾತಿಗೆ ಸಂಬಂಧಿಸಿದ ಇನ್ನಿತರ ಯಾವುದೇ ಮಾಹಿತಿಯನ್ನು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯ ವೆಬ್‌ಸೈಟ್/ಕೇಂದ್ರ ಕಛೇರಿಯನ್ನು ಸಂಪರ್ಕಿಸಿ ಪಡೆಯಬಹುದು.

**6. ಅರ್ಹತಾ ಷರತ್ತುಗಳು:**

1) ಭಾರತೀಯ ನಾಗರೀಕನಾಗಿರತಕ್ಕದ್ದು.

2) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರತಕ್ಕದ್ದು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತನಾಗಿರತಕ್ಕದ್ದು.

3) ದೈಹಿಕವಾಗಿ ಅನರ್ಹರಾಗಿದ್ದಾನೆಂಬುದಾಗಿ ವೈದ್ಯಕೀಯ ಪರೀಕ್ಷೆಯಲ್ಲಿ ಕಂಡುಬಂದಲ್ಲಿ ನೇಮಕಾತಿಯನ್ನು ತಿರಸ್ಕರಿಸುವ ಪೂರ್ಣ ವಿವೇಚನಾಧಿಕಾರವನ್ನು ಸಂಯುಕ್ತ ಸಹಕಾರಿಯು ಕಾದಿರಿಸಿಕೊಂಡಿದೆ.

4) ಒಬ್ಬ ಅಭ್ಯರ್ಥಿಯು ನೈಜ ವ್ಯಕ್ತಿಯಾಗಿಲ್ಲವೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ/ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಸಹಿ/–

ವ್ಯವಸ್ಥಾಪಕ ನಿರ್ದೇಶಕ

**ಪ್ರಸ್ತುತವಾಗಿ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರಿಗಳಿಂದ ಪಡೆಯಬೇಕಾದ ನಿರಾಕ್ಷೇಪಣಾ/ಅನುಮತಿ ಪತ್ರದ ನಮೂನೆ**

**ನಿರಾಕ್ಷೇಪಣಾ/ಅನುಮತಿ ಪತ್ರದ ನಮೂನೆ ಸಂಖ್ಯೆ:** **ದಿನಾಂಕ:**

ಶ್ರೀ/ಶ್ರೀಮತಿ ----------------------------------------------ತಂದೆ-------------------- ---------------------- ಇವರು ದಿನಾಂಕ: ------------ ರಿಂದ ----------- ದಿನಾಂಕದವರೆಗೆ -- ------------------------------------------------------------------------------- ------------- ಸಂಸ್ಥೆಯಲ್ಲಿ ----------------------- ಹುದ್ದೆಯಲ್ಲಿ ಖಾಯಂ/ ಹಂಗಾಮಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸದರಿಯವರು ಕ.ರಾ.ಸೌ.ಸಂ.ಸ.ನಿ., ಇದರ ನೇಮಕಾತಿ ಅಧಿಸೂಚನೆಯಂತೆ ಆಹ್ವಾನಿಸಿರುವ ----- ------------ ಹುದ್ದೆಗೆ ಅರ್ಜಿ ಸಲ್ಲಿಸಲು ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ಈ ಮೂಲಕ ದೃಢೀಕರಿಸಿದೆ.

ಸಂಸ್ಥೆಯ ಮೊಹರು

ಪ್ರಾಧಿಕಾರಿಗಳ ಪದನಾಮ
ಮೊಹರು

ದಿನಾಂಕ:
ಸ್ಥಳ: